# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 453 (581) |
| ಮಾನ್ಯ ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16/09/2021 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಒಟ್ಟು ಸಂಘಟಿತ ಮತ್ತು ಅಸಂಘಟಿತ ವಲಯದಲ್ಲಿರುವ ಕಾರ್ಮಿಕರುಗಳನ್ನು ಗುರುತಿಸುವಲ್ಲಿ ಮತ್ತು ಅವರುಗಳಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವಲ್ಲಿ ಕುಂಠಿತವಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿರುವ ಸಂಘಟಿತ ಮತ್ತು ಅಸಂಘಟಿತ ವಲಯದಲ್ಲಿರುವ ಕಾರ್ಮಿಕರುಗಳನ್ನು ಗುರುತಿಸುವಲ್ಲಿ ಮತ್ತು ಅವರುಗಳ ಕಲ್ಯಾಣಕ್ಕಾಗಿ ಸರ್ಕಾರವು ವಿವಿಧ ಮಂಡಳಿಗಳ ಮೂಲಕ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸುತ್ತಿದ್ದು, ವಿವರಗಳು ಈ ಕೆಳಗಿನಂತಿವೆ.<br><br>1. **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-</u>**<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಈವರೆಗೆ 30.39 ಲಕ್ಷ ಕಟ್ಟಡ ಕಾರ್ಮಿಕರನ್ನು ಫಲಾನುಭವಿಗಳನ್ನಾಗಿ ನೋಂದಾಯಿಸಲಾಗಿದೆ. ಮಂಡಳಿಯಿಂದ ಕಟ್ಟಡ ಕಾರ್ಮಿಕರನ್ನು ಗುರುತಿಸಲು ಯಾವುದೇ ಪ್ರತ್ಯೇಕ ಸಮೀಕ್ಷೆ ನಡೆಸಿರುವುದಿಲ್ಲ.<br>2007 ರಿಂದ ಇಲ್ಲಿಯವರೆಗೆ ಮಂಡಳಿಯಲ್ಲಿ ನೋಂದಣಿಯಾಗಿರುವ ಕಾರ್ಮಿಕರಲ್ಲಿ 9,32,979 ಕಾರ್ಮಿಕರಿಗೆ ಒಟ್ಟು ರೂ.1006.88 ಕೋಟಿ ಮೊತ್ತವನ್ನು ವಿವಿಧ ಯೋಜನೆಗಳಡಿ ಧನಸಹಾಯದ ರೂಪದಲ್ಲಿ ನೀಡಲಾಗಿದೆ.<br><br>2. **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-</u>**<br>ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ವಲಯದ ಇತರೆ ವರ್ಗ (ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಕಾಯ್ದೆ 2008ರ ಕಲಂ 2(m) ಹಾಗೂ ಕಲಂ 2(l) ರ ವ್ಯಾಖ್ಯಾನಕ್ಕೆ ಒಳಪಡುವ ಅಸಂಘಟಿತ ವರ್ಗದ ಎಲ್ಲಾ ಕಾರ್ಮಿಕರು) ಸೇರಿದಂತೆ ಈವರೆಗೆ ಒಟ್ಟು 43 ಕಾರ್ಮಿಕರ ವರ್ಗಗಳನ್ನು ಗುರುತಿಸಲಾಗಿದೆ. |

| | | |
|---|---|---|
| | | ಪ್ರಸ್ತುತ, ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಲ್ಲಿ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಈ ಯೋಜನೆಗಳಡಿ ದೊರೆಯುವ ಸೌಲಭ್ಯಗಳನ್ನು ಕಾರ್ಮಿಕರಿಗೆ ತಲುಪಿಸುವಲ್ಲಿ ಯಾವುದೇ ಸಮಸ್ಯೆಗಳು ಇರುವುದಿಲ್ಲ.<br>• ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ.<br>• ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ.<br>3. **<u>ಕರ್ನಾಟಕ ರಾಜ್ಯ ಕಾರ್ಮಿಕ ಕಲ್ಯಾಣ ಮಂಡಳಿ:-</u>**<br>ಕಾರ್ಮಿಕ ಇಲಾಖೆಯ ಅಧೀನದಲ್ಲಿರುವ ಕಾರ್ಮಿಕ ಕಲ್ಯಾಣ ಮಂಡಳಿಯು **ಸಂಘಟಿತ** ಕಾರ್ಮಿಕ ವರ್ಗದವರಿಗಾಗಿ ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳ ಮಾಹಿತಿಯನ್ನು ಕಾರ್ಮಿಕರಿಗೆ ತಲುಪುವಂತೆ ಮಾಡಲು ಹಾಗೂ ಫಲಾನುಭವಿಗಳು ಯೋಜನೆಗಳ ಸೌಲಭ್ಯಗಳನ್ನು ಸರಳ ರೀತಿಯಲ್ಲಿ ಪಡೆಯುವಂತಾಗಲು ಪತ್ರಿಕಾ ಪ್ರಕಟಣೆ, ಕರಪತ್ರಗಳ ವಿತರಣೆ, ಯೋಜನಾ ಸೌಲಭ್ಯಗಳ ಬ್ಯಾನರ್ ಪ್ರದರ್ಶನ ಹಾಗೂ ಆನ್‌ಲೈನ್ ವ್ಯವಸ್ಥೆಯನ್ನು ಮಂಡಳಿಯಿಂದ ರೂಪಿಸಲಾಗಿದೆ. |
| ಆ) | ಹಾಗಿದ್ದಲ್ಲಿ, ಈವರೆಗೆ ಸಂಘಟಿತ ಮತ್ತು ಅಸಂಘಟಿತ ವಲಯದಲ್ಲಿ ಒಟ್ಟು ನೋಂದಾಯಿಸಿರುವ ಕಾರ್ಮಿಕರುಗಳ ಸಂಖ್ಯೆ ಎಷ್ಟು; ಅವರುಗಳಿಗೆ ಸರ್ಕಾರದಿಂದ ಯಾವ ಯಾವ ಯೋಜನೆಗಳನ್ನು ಈವರೆಗೆ ಒದಗಿಸಲಾಗಿದೆ; (ವಿವರ ನೀಡುವುದು). | 1. **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-</u>**<br>ಈ ಮಂಡಳಿಯಲ್ಲಿ 30.39 ಲಕ್ಷ ಕಾರ್ಮಿಕರು ನೋಂದಣಿಯಾಗಿರುತ್ತಾರೆ. ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಬಿತರಿಗೆ 19 ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳನ್ನು ರೂಪಿಸಿದ್ದು ಸದರಿ ಯೋಜನೆಗಳಡಿ ಸೌಲಭ್ಯಗಳನ್ನು ನೀಡಲಾಗುತ್ತಿದೆ. ವಿವರಗಳನ್ನು **<u>ಅನುಬಂಧ-1ರಲ್ಲಿ</u>** ಲಗತ್ತಿಸಿದೆ.<br>2. **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-</u>**<br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳು ಮತ್ತು ನೋಂದಾಯಿತರಾದ ಅಸಂಘಟಿತ ಕಾರ್ಮಿಕರ ವಿವರಗಳು ಈ ಕೆಳಕಂಡಂತಿದೆ.<br>1. **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:**<br>ಸಾರಿಗೆ ಇಲಾಖೆಯು ಒದಗಿಸಿರುವ ದತ್ತಾಂಶದ ಪ್ರಕಾರ ರಾಜ್ಯದಲ್ಲಿ ಊರ್ಜಿತ ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲನಾ ಪರವಾನಗಿ ಹೊಂದಿರುವ 9,12,100 ಚಾಲಕರಿದ್ದು, ಅದರಲ್ಲಿ ಸರ್ಕಾರಿ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಚಾಲಕರನ್ನು |

| | | |
|---|---|---|
| | | ಹೊರತುಪಡಿಸಿ ಉಳಿದ 8,40,561 ಚಾಲಕರನ್ನು ಈ ಯೋಜನೆಯಡಿ ಫಲಾನುಭವಿಗಳೆಂದು ಪರಿಗಣಿಸಲಾಗಿದೆ.<br><br>ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಸಂಬಂಧಪಟ್ಟಂತೆ ಈ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>(ಅ) **ಅಪಘಾತ ಪರಿಹಾರ ಸೌಲಭ್ಯ** : ಯೋಜನೆಯಡಿ, ಅಪಘಾತದಿಂದಾದ ಮರಣ ಹೊಂದಿದ ಪ್ರಕರಣಗಳಲ್ಲಿ ರೂ. 5 ಲಕ್ಷ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೂ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br><br>(ಆ) **ಶೈಕ್ಷಣಿಕ ಧನ ಸಹಾಯ:** ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br><br>(ಇ) **ಅಪಘಾತ ಜೀವ ರಕ್ಷಕ ಕಾರ್ಯಕ್ರಮ:** ಈ ಕಾರ್ಯಕ್ರಮದಡಿ ಅಪಘಾತಕ್ಕೊಳಗಾದ ಗಾಯಾಳುಗಳನ್ನು ರಕ್ಷಿಸುವ ದೃಷ್ಟಿಯಿಂದ ಅಪಘಾತ ಜೀವರಕ್ಷಕರನ್ನಾಗಿಸುವ ಉದ್ದೇಶದಿಂದ ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿಯನ್ನು ನೀಡಲಾಗುತ್ತಿದ್ದು, ತರಬೇತಿ ಪಡೆದ ಚಾಲಕರಿಗೆ ಪ್ರಥಮ ಚಿಕಿತ್ಸಾ ಕಿಟ್ ಹಾಗೂ ಪ್ರಮಾಣ ಪತ್ರ ನೀಡಲಾಗುತ್ತಿದೆ.<br><br>**ಶ್ರಮ ಸಮ್ಮಾನ ಪ್ರಶಸ್ತಿ:** ಪ್ರತಿ ವರ್ಷ ಸರ್ಕಾರದ ಆದೇಶದಂತೆ, ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, ಉತ್ತಮ ಹಾಗೂ ಸುರಕ್ಷತಾ ಚಾಲನೆ ಮಾಡಿದ ತ್ರಿಚಕ್ರ ಹಾಗೂ ನಾಲ್ಕು ಚಕ್ರದ ವಾಹನ ಚಾಲಕರಿಗೆ ಪ್ರತಿ ಜಿಲ್ಲೆಗೆ ಪ್ರತ್ಯೇಕವಾಗಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು ರಾಜ್ಯಾದ್ಯಂತ 660 ಚಾಲಕರಿಗೆ "ಶ್ರಮ ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗುತ್ತಿದೆ.<br><br>**2. ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:**<br>ಈ ಯೋಜನೆಯಡಿ ಅಸಂಘಟಿತ ಕಾರ್ಮಿಕರನ್ನು ಗುರುತಿಸಿ ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ನೀಡುವ |

| | | |
|---|---|---|
| | | ಸಂಬಂಧ ಪ್ರಸ್ತುತ 11 ವರ್ಗಗಳ ಕಾರ್ಮಿಕರಾದ ಹಮಾಲರು, ಗೃಹಕಾರ್ಮಿಕರು, ಚಿಂದಿ ಆಯುವವರು, ಟೈಲರ್‌ಗಳು, ಮೆಕ್ಯಾನಿಕ್ಸ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ ವೃತ್ತಿಯ 2,16,900 ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿದೆ. ಈ ಯೋಜನೆಯಡಿ ನೋಂದಾಯಿತ ಕಾರ್ಮಿಕರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>(ಅ) **"ಸ್ಮಾರ್ಟ್ ಕಾರ್ಡ್"**:ಈ ಯೋಜನೆಯಡಿ ಅಸಂಘಟಿತ ವಲಯದ 11 ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗುತ್ತಿದೆ.<br><br>(ಆ) **ಶ್ರಮ ಸಮ್ಮಾನ ಪ್ರಶಸ್ತಿ**: ಪ್ರತಿ ವರ್ಷ, ಮಾರ್ಚ್ 01 ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾರ್ಮಿಕ ಸಮ್ಮಾನ ದಿನಾಚರಣೆ ಆಚರಿಸಿ, 11 ಅಸಂಘಟಿತ ವಲಯಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ" ವಲಯಗಳಲ್ಲಿ ವಿಶೇಷ ಸಾಧನೆ ಮಾಡಿದ ಕಾರ್ಮಿಕರನ್ನು ಗುರುತಿಸಿ, ಪ್ರತಿಯೊಂದು ಜಿಲ್ಲೆಗೆ ಪ್ರತಿಯೊಂದು ವಲಯಕ್ಕೆ ಪ್ರಥಮ, ದ್ವಿತೀಯ ಹಾಗೂ ತೃತೀಯ ಪ್ರಶಸ್ತಿ ಮತ್ತು 8 ವಿಶೇಷ ಪುರಸ್ಕಾರ ಪ್ರಶಸ್ತಿಗಳು ಸೇರಿ ಒಟ್ಟು 3,630 ಕಾರ್ಮಿಕರಿಗೆ "ಶ್ರಮ ಸಮ್ಮಾನ ಪ್ರಶಸ್ತಿ" ನೀಡಿ ಗೌರವಿಸಲಾಗುತ್ತಿದೆ.<br><br>**3. ಕೋವಿಡ್-19ರ ವಿಶೇಷ ಪ್ಯಾಕೇಜ್:-**<br><br>ಕೋವಿಡ್-19 ಸಾಂಕ್ರಾಮಿಕದಿಂದಾಗಿ2020ನೇ ವರ್ಷದಲ್ಲಿ, ಮೊದಲನೇ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ ಅಗಸರು ಮತ್ತು ಕ್ಷೌರಿಕರ ವೃತ್ತಿ ಕಾರ್ಮಿಕರಿಗೆ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದ ವಿಶೇಷ ಪ್ಯಾಕೇಜ್ ಅಡಿ ಒಂದು ಬಾರಿಯ ರೂ.5,000/-ಗಳ ನೆರವನ್ನು ಕೋರಿ 1,41,602 ಕಾರ್ಮಿಕರು ಅರ್ಜಿ ಸಲ್ಲಿಸಿರುತ್ತಾರೆ.<br><br>2021 ರಲ್ಲಿ ಕೋವಿಡ್-19 ಸಾಂಕ್ರಾಮಿಕದಿಂದಾಗಿ 2ನೇ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ ಅಸಂಘಟಿತ ವಲಯದ 11 ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ" ವೃತ್ತಿ |

| | | |
|---|---|---|
| | | ನಿರ್ವಹಿಸುತ್ತಿರುವ ಅಸಂಘಟಿತ ಕಾರ್ಮಿಕರಿಗೆ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದ ವಿಶೇಷ ಪ್ಯಾಕೇಜ್ ಅಡಿ ಒಂದು ಬಾರಿಯ ರೂ.2,000/- ಗಳ ನೆರವನ್ನು ಕೋರಿ ಸೇವಾ ಸಿಂಧು ಪೋರ್ಟಲ್ ಮೂಲಕ 14,52,943 ಕಾರ್ಮಿಕರು ಅರ್ಜಿ ಸಲ್ಲಿಸಿರುತ್ತಾರೆ.<br><br>4. **ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್‌ಧನ್ ಯೋಜನೆ (ಪಿಎಂ-ಎಸ್‌ವೈಎಂ):-** ಕೇಂದ್ರ ಸರ್ಕಾರದ ಈ ಯೋಜನೆಯಡಿ 18 – 40 ವರ್ಷ ವಯೋಮಾನದ ಅಸಂಘಟಿತ ಕಾರ್ಮಿಕರು ನೊಂದಾಯಿಸಿಕೊಂಡು 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ.3,000/- ಗಳ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಮಾಸಿಕ ತಲಾ ರೂ. 55/- ರಿಂದ ರೂ. 200/- ರವರೆಗೆ ಕೇಂದ್ರ ಸರ್ಕಾರವು ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ. ಈವರೆಗೆ 99,630 ಕಾರ್ಮಿಕರು ಈ ಯೋಜನೆಯಡಿ ನೋಂದಾಯಿತರಾಗಿರುತ್ತಾರೆ.<br><br>5. **New Pension Scheme For Traders And Self Employed Persons**<br>ಕೇಂದ್ರ ಸರ್ಕಾರದ ಈ ಯೋಜನೆಯಡಿ 18 ರಿಂದ 40 ವರ್ಷ ವಯೋಮಾನದ ಅಂಗಡಿ ಮಾಲೀಕರು, ಚಿಲ್ಲರೆ ವ್ಯಾಪಾರಿಗಳು, ಅಕ್ಕಿ ಗಿರಣಿ ಮಾಲೀಕರು, ಎಣ್ಣೆ ಗಿರಣಿ ಮಾಲೀಕರು, ವರ್ಕ್‌ಶಾಪ್ ಮಾಲೀಕರು, ಕಮಿಷನ್ ಏಜೆಂಟ್ಸ್, ರಿಯಲ್ ಎಸ್ಟೇಟ್‌ನ ಬ್ರೋಕರ್ಸ್, ಸಣ್ಣ ಹೋಟೆಲ್ ಹಾಗೂ ರೆಸ್ಟೋರೆಂಟ್‌ನ ಮಾಲೀಕರು ಹಾಗೂ ಅಂತಹ ಇತರೆ ಸಣ್ಣ ವ್ಯಾಪಾರಗಳಲ್ಲಿ ತೊಡಗಿಸಿಕೊಂಡ ವ್ಯಾಪಾರಿಗಳು/ ಲಘು ವ್ಯಾಪಾರಿಗಳು ಹಾಗೂ ಸ್ವಯಂ ಉದ್ಯೋಗಿಗಳು ನೊಂದಾಯಿಸಿಕೊಂಡು 60 ವರ್ಷ ಪೂರೈಸಿದ ನಂತರ ಮಾಸಿಕ ನಿಶ್ಚಿತ ರೂ.3,000/- ಗಳ ಪಿಂಚಣಿ ಸೌಲಭ್ಯ ಪಡೆಯಬಹುದಾಗಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಅವರ ವಯಸ್ಸಿನ ಆಧಾರದ ಮೇಲೆ ಮಾಸಿಕ ತಲಾ ರೂ. 55/- ರಿಂದ ರೂ. 200/- ರವರೆಗೆ ಕೇಂದ್ರ ಸರ್ಕಾರವು ಸಮಾನಾಂತರ ವಂತಿಕೆಯನ್ನು ಪಾವತಿಸುತ್ತದೆ. ಈವರೆಗೆ 1,100 ಕಾರ್ಮಿಕರು ಯೋಜನೆಯಡಿ ಫಲಾನುಭವಿಗಳಾಗಿ ನೋಂದಾಯಿತರಾಗಿರುತ್ತಾರೆ.<br><br>3. **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:-**<br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ |

| | | |
|---|---|---|
| | - | ನೋಂದಣಿ ವ್ಯವಸ್ಥೆ ಇರುವುದಿಲ್ಲ. ಮಂಡಳಿಗೆ ವರ್ಷಕ್ಕೆ ಒಂದು ಬಾರಿ 20:40ರ ಅನುಪಾತದಲ್ಲಿ ವಂತಿಗೆ ಪಾವತಿ ಮಾಡುವ ವಿವಿಧ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಂಘಟಿತ ಕಾರ್ಮಿಕರಿಗೆ ಈ ಕೆಳಕಂಡ ಯೋಜನೆಯಡಿ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ<br>4) ಹೆರಿಗೆ ಭತ್ಯೆ ಸೌಲಭ್ಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ |
| ಇ) | ಕಟ್ಟಡ ಕಾರ್ಮಿಕರು ಯಾವ (ಸಂಘಟಿತ/ಅಸಂಘಟಿತ) ವಲಯದಲ್ಲಿ ನೋಂದಾಯಿಸಿಕೊಳ್ಳಬೇಕು; | <u>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**</u><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಅಸಂಘಟಿತ ವಲಯಕ್ಕೆ ಸೇರಿದ್ದರು ಕೂಡ ಕರ್ನಾಟಕದಲ್ಲಿ ಅವರಿಗಾಗಿ ಪ್ರತ್ಯೇಕವಾದ ಮಂಡಳಿಯಲ್ಲಿ ರಚಿಸಲಾಗಿದ್ದು ಸದರಿ ಕಾರ್ಮಿಕರು ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ಫಲಾನುಭವಿಗಳಾಗಿ ನೋಂದಾಯಿಸಕೊಳ್ಳಬಹುದಾಗಿರುತ್ತದೆ. |
| ಈ) | ಸಂಘಟಿತ/ ಅಸಂಘಟಿತ ಕಾರ್ಮಿಕರ ಹೆಸರು ನೋಂದಾಯಿಸಿಕೊಳ್ಳಲು ಇರುವ ಮಾನದಂಡಗಳೇನು; ಕಟ್ಟಡ ಕಾರ್ಮಿಕರ ನೋಂದಣಿ ಮಾಡುವುದು ಮತ್ತು ನವೀಕರಣ ಮಾಡುವ ವಿಧಾನ ಹೇಗೆ; | **1.** <u>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:-**</u><br>ಮಂಡಳಿಯಲ್ಲಿ ಫಲಾನುಭವಿಗಳನ್ನಾಗಿ ನೋಂದಣಿಯಾಗಲು ಮತ್ತು ನವೀಕರಣ ಮಾಡಿಕೊಳ್ಳಲು ಸೇವಾ ಸಿಂಧು ತಂತ್ರಾಂಶದ ಮೂಲಕ ಅಥವಾ ಕಾರ್ಮಿಕ ಇಲಾಖೆಯ ಹಿರಿಯ / ಕಾರ್ಮಿಕ ನಿರೀಕ್ಷಕರ ಕಛೇರಿಗೆ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಕಟ್ಟಡ ಕಾರ್ಮಿಕರು ನೋಂದಣಿ ಮತ್ತು ನವೀಕರಣ ಮಾಡಿಕೊಳ್ಳಲು ಇರುವ ವಿಧಾನ / ಅರ್ಹತೆಗಳು / ಮಾನದಂಡಗಳು ಈ ಕೆಳಕಂಡಂತಿದೆ.<br>1. ನಮೂನೆ 5(1) ರಲ್ಲಿ ಆನ್‌ಲೈನ್‌ನಲ್ಲಿ ಅರ್ಜಿಯೊಂದಿಗೆ ಈ ಕೆಳಕಂಡ ದಾಖಲೆಗಳನ್ನು ಕಾರ್ಯವ್ಯಾಪ್ತಿಯ ಕಾರ್ಮಿಕ ನಿರೀಕ್ಷಕರಿಗೆ ಸಲ್ಲಿಸಬೇಕು.<br>ಅ. ವಯೋಮಿತಿ 18 ರಿಂದ 60 ವರ್ಷದೊಳಗಿರಬೇಕು<br>ಆ. ಉದ್ಯೋಗ ದೃಢೀಕರಣ ಪತ್ರ/ ಸ್ವಯಂ ದೃಢೀಕರಣ ಪತ್ರ.<br>ಇ. ಮೂರು ಪಾಸ್ ಪೋರ್ಟ್ ಅಳತೆಯ ಭಾವಚಿತ್ರ. |

| | | |
|---|---|---|
| | | ಈ. ವಯಸ್ಸಿನ ದಾಖಲೆ ಪತ್ರ.<br>ಉ. ಕಳೆದ 1 ವರ್ಷದಲ್ಲಿ ಕಟ್ಟಡ ಅಥವಾ ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕನಿಷ್ಠ ೯೦ ದಿನಗಳು ಕೆಲಸ ನಿರ್ವಹಿಸಿರಬೇಕು.<br>ಊ. ಅರ್ಜಿದಾರರ ಹಾಗೂ ಅವನ ಅವಲಂಬಿತರ ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಖಾತೆಯ ಪಾಸ್‌ಬುಕ್ ಪ್ರತಿ.<br>ಕಳೆದ 1 ವರ್ಷದಲ್ಲಿ ಕಟ್ಟಡ ಅಥವಾ ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕನಿಷ್ಠ ೯೦ ದಿನಗಳು ಕೆಲಸ ನಿರ್ವಹಿಸಿ ಮಾಹಿತಿಯನ್ನು ನಮೂನೆ-5 (ಎ) (ಬಿ) (ಸಿ) (ಡಿ)ರಲ್ಲಿ ಭರ್ತಿಮಾಡಿ ಪ್ರತಿ ವರ್ಷ ಅಥವಾ 3 ವರ್ಷಕ್ಕೊಮ್ಮೆ ಸದಸ್ಯತ್ವನ್ನು ನವೀಕರಣ ಮಾಡಿಕೊಳ್ಳಬೇಕಾಗಿರುತ್ತದೆ.<br><br>2. **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:-**<br>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ನೋಂದಣಿಗಾಗಿ ಇರುವ ಮಾನದಂಡಗಳು ಈ ಕೆಳಗಿನಂತಿದೆ:<br><br>**(1)ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-**<br><br>**ಮಾನದಂಡ:-**<br>• ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.<br>• ಯೋಜನೆಯು ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಅನ್ವಯಿಸುತ್ತದೆ.<br>• ವಯೋಮಿತಿ 20 ರಿಂದ 70 ವರ್ಷಗಳು.<br>• ಯೋಜನೆಯ ಸೌಲಭ್ಯಗಳು ಕರ್ತವ್ಯದಲ್ಲಿರುವಾಗ ಹಾಗೂ ಇಲ್ಲದಿರುವಾಗಲೂ ಸಂಭವಿಸಿದ ಅಪಘಾತ ಪ್ರಕರಣಗಳಲ್ಲಿ ಸಹ ಲಭ್ಯವಾಗುತ್ತವೆ.<br>• ಚಾಲಕರು, ಕರ್ನಾಟಕ ರಾಜ್ಯ ಸಾರಿಗೆ ಇಲಾಖೆಯಿಂದ ವಾಣಿಜ್ಯ ವಾಹನ ಚಲಾಯಿಸಲು ಊರ್ಜಿತ ಚಾಲನಾ ಪರವಾನಗಿಯನ್ನು ಹೊಂದಿರಬೇಕು.<br>• ನಿರ್ವಾಹಕರು ಮತ್ತು ಕ್ಲೀನರ್‌ಗಳಿಗೆ ಸಂಬಂಧಿಸಿದಂತೆ, ಜಿಲ್ಲಾ ಕಾರ್ಮಿಕರ ಅಧಿಕಾರಿಗಳಲ್ಲಿ ನಿಗದಿತ ನಮೂನೆಯ ಅರ್ಜಿಯನ್ನು ಭರ್ತಿ ಮಾಡಿ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ. |

| | | |
|---|---|---|
| | | (2) **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:–**<br>**ಮಾನದಂಡ:–**<br>• ಈ ಯೋಜನೆಯು ಕರ್ನಾಟಕ ರಾಜ್ಯಕ್ಕೆ ಮಾತ್ರ ಅನ್ವಯಿಸುತ್ತದೆ.<br>• ವಯೋಮಿತಿ 18 ರಿಂದ 60 ವರ್ಷಗಳು.<br>• ಪ್ರಸ್ತುತ 11 ವರ್ಗಗಳ ಅಸಂಘಟಿತ ಕಾರ್ಮಿಕರಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕರಿಗೆ" ಅನ್ವಯಿಸುತ್ತದೆ.<br>3. **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:–**<br>ಈ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರ ನೊಂದಣಿ ವ್ಯವಸ್ಥೆ ಇರುವುದಿಲ್ಲ. ಆದರೆ ಮಂಡಳಿಗೆ ರೂ. 20:40ರ ಅನುಪಾತದಲ್ಲಿ ವಂತಿಗೆ ಪಾವತಿಸುವ ಸಂಘಟಿತ ಕಾರ್ಮಿಕರಿಗೆ ಮಂಡಳಿಯು ಜಾರಿಗೊಳಿಸುತ್ತಿರುವ ಕಲ್ಯಾಣ ಯೋಜನೆಗಳ ಉಪಯೋಗ ಪಡೆಯಲು ಅವಕಾಶವಿರುತ್ತದೆ. |
| ಉ) | ಕಟ್ಟಡ ಕಾರ್ಮಿಕರಿಗಾಗಿ ಇರುವ ಸರ್ಕಾರದ ವಿವಿಧ ಸವಲತ್ತುಗಳು/ಯೋಜನೆಗಳಾವುವು; ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? | 1. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:–**<br>ಈ ಮಂಡಳಿಯ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರಿಗೆ ಮಂಡಳಿಯು ರೂಪಿಸಿ ಜಾರಿಗೊಳಿಸುತ್ತಿರುವ 19 ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ವಿವರಗಳನ್ನು **ಅನುಬಂಧದಲ್ಲಿ** ಲಗತ್ತಿಸಿದೆ. ಎಂಪ್ಯಾನಲ್‌ಗೊಂಡ ತರಬೇತಿ ಸಂಸ್ಥೆಗಳಿಂದ ನೋಂದಾಯಿತ ಕಾರ್ಮಿಕರ ಮಕ್ಕಳಿಗೆ ಯುಪಿಎಸ್‌ಸಿ /ಕೆಪಿಎಸ್‌ಸಿ ಪರೀಕ್ಷೆಗೆ ಹಾಜರಾಗಲು ಮಂಡಳಿಯಿಂದ ತರಬೇತಿ ಒದಗಿಸುವ ಕ್ರಮ ಕೈಗೊಳ್ಳಲಾಗುತ್ತಿದೆ. |

**ಕಾಇ 369 ಎಲ್‌ಇಟಿ 2021**

*(ಅರಬೈಲ್ ಶಿವರಾಂ ಹೆಬ್ಬಾರ್)*
ಕಾರ್ಮಿಕ ಸಚಿವರು

## ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

## ಅನುಬಂಧ-01

### ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆಮಾಸಿಕ ರೂ.2,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈಯೋಜನೆಯನ್ನು ಜಾರಿಗೊಳಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ (ಶ್ರಮ ಸಾಮರ್ಥ್ಯ)** : ರೂ.30,000/- ವರೆಗೆ
6. **ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯಅವಲಂಭಿತರಿಗೆ( ಈಯೋಜನೆಯನ್ನು ಜಾರಿಗೊಳಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. 30,000/- ಮತ್ತುಗಂಡು ಮಗುವಿನ ಜನನಕ್ಕೆರೂ.20,000/-
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆವೆಚ್ಚ :ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರ.ಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ(ವರ್ಷ 3 ರಿಂದ 5) | 5,000 |
| 2 | 1 ರಿಂದ 4ನೇ ತರಗತಿ | 5,000 |
| 3 | 5 ರಿಂದ 8ನೇ ತರಗತಿ | 8,000 |
| 4 | 9 ಹಾಗೂ 10ನೇ ತರಗತಿ | 12,000 |
| | ಪದವಿ ಪೂರ್ವ | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯಪಿ.ಯು.ಸಿ | 15,000 |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 20,000 |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | 40,000 |
| 8 | ಡಿ.ಎಡ್ | 25,000 |
| | ಬಿ.ಎಡ್ | 35,000 |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | 25,000 |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | 30,000 |

| | | |
|---|---|---|
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |
| **ತಾಂತ್ರೀಕ/ ವೈದ್ಯಕೀಯಎನ್ಇಇಟಿಅಥವಾ ಕೆಸಿಇಟಿ** | | |
| 12 | ಬಿಇ / ಬಿ.ಟೆಕ್ಅಥವಾ ಸಂಬಂಧಪಟ್ಟಯೂಜಿಕೋರ್ಸ್ | ಸದರಿ<br>ಕೋರ್ಸ್‌ನಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರಕೋರ್ಸ್) | ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕರೂ. 60,000 |
| 14 | ವೈದ್ಯಕೀಯ(ಎಮ್‌ಬಿಬಿಎಸ್ /ಬಿಎಎಮ್‌ಎಸ್ / ಬಿಡಿಎಸ್ /ಬಿಹೆಚ್‌ಎಮ್‌ಎಸ್‌ಕೋರ್ಸ್‌ಗೆಅಥವಾಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>ರೂ. 25,000 (ಯೂಜಿಸಿಯ<br>ಜೂನಿಯರ್‌ರಿಸರ್ಚ್ ಪೆಲೋಶಿಫ್‌ಗೆ<br>ಆಯ್ಕೆಯಾಗಿರುವ ಅಭ್ಯರ್ಥಿಗಳು<br>ಕೇಂದ್ರ ಮತ್ತು<br>ರಾಜ್ಯ ಸರ್ಕಾರದಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾ<br>ಯೂಜಿಸಿ ನಿಯಮಗಳನ್ವಯ ವೇತನ<br>ಅನುದಾನಕ್ಕೆ ಒಳಪಡುವ ಹು<br>ಅನುದಾನಿತ<br>ಕಾಲೇಜುಗಳಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು<br>ಈ ಸೌಲಭ್ಯವನ್ನು ಪಡೆಯಲು<br>ಅರ್ಹರಿರುವುದಿಲ್ಲ. |

| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್ಇಆರ್/ ಎಐಐಎಮ್ಎಸ್ /ಎನ್ಎಲ್ಯೂಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋಧನಾ ಶುಲ್ಕ |
|---|---|---|

12. **ವೈದ್ಯಕೀಯ ಸಹಾಯಧನ (ಕಾರ್ಮಿಕಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರಅವಲಂಭಿತರಿಗೆರೂ.300/- ರಿಂದರೂ.10,000/-ವರೆಗೆ
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿರೂ.5,00,000/-, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ ರೂ.2,00,000/- ಮತ್ತುಭಾಗಶಃ ಶಾಶ್ವತದುರ್ಬಲತೆಯಾದಲ್ಲಿ ರೂ.1,00,000/-
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲುತೆಗೆಯುವಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್‌ಚಿಕಿತ್ಸೆ, ಇತರೆಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ ರೂ.2,00,000/-ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾಅವರಇಬ್ಬರು ಮಕ್ಕಳ ಮದುವೆಗೆತಲಾ ರೂ.50,000/-
16. **LPG ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ):** ಅನಿಲ ಸಂಪರ್ಕದೊಂದಿಗೆಎರಡು ಬರ್ನರ್ ಸ್ಟೌವ್
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿತೊಡಗಿರುವ ನೋಂದಾಯಿತಕಾರ್ಮಿಕರಇಬ್ಬರು ಮಕ್ಕಳಿಗೆ ( ಈಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕರೂ.6,000/- ಗಳ ಸಹಾಯಧನ.